# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಂಪಿ ವಿಶ್ವಪರಂಪರೆ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಲಾಗಿರುವ ಮಹಾ ಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ ನಅಇ 85 ಬೆಮಪ್ರಾ 2007, ದಿನಾಂಕ: 14.5.07.

2) ಆಯುಕ್ತರು, ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ, ಹೊಸಪೇಟೆ ಇವರ ಪತ್ರ ಸಂಖ್ಯೆ. ಹವಿಪಪ್ರನಿಪ್ರಾ/ ಹೊ/ಮಾಪ್ರಾ/2007-08/886, ದಿನಾಂಕ: 25.1.08.

3) ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಏಕ ಕಡತ ಸಂಖ್ಯೆ.ನಯೋ:ಉನಿ(ಯೋ.ವಿ):ಹಂಪಿ:157:ಮಾ.ಪ್ರಾ:2007-08.

4) ಸರ್ಕಾರದ ಕಾರ್ಯದರ್ಶಿ, ನಅಇ ರವರ ಅಧ್ಯಕ್ಷತೆಯಲ್ಲಿ ದಿನಾಂಕ:12.05.2008 ರಲ್ಲಿ ಜರುಗಿದ ಸಭೆಯ ನಡವಳಿಗಳು

ಪ್ರಸ್ತಾವನೆ:

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ, ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ಆಯುಕ್ತರು, ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ, ಹೊಸಪೇಟೆ ಇವರು ಹಂಪಿ ವಿಶ್ವ ಪರಂಪರೆ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಯನ್ನು ರೂಪಿಸಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ನಗರ ಯೋಜನಾ ಇಲಾಖೆಯ ಮುಖಾಂತರ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3) ರ ಏಕ ಕಡತದಲ್ಲಿ, ನಗರ ಯೋಜನಾ ನಿರ್ದೇಶಕರು, ಹಂಪಿ ವಿಶ್ವ
ಪರಂಪರೆ ಸ್ಥಳೀಯ ಯೋಜನಾ ಪ್ರದೇಶದ ಜನಸಂಖ್ಯೆಯು 2001 ರಲ್ಲಿ 59,941 ರಷ್ಟಿದ್ದು, 20
ವರ್ಷಗಳ ಯೋಜನಾ ಅವಧಿಗೆ ಅಂದರೆ 2021 ನೇ ಇಸವಿಗೆ 90,000 ಆಗಬಹುದೆಂದು
ಅಂದಾಜಿಸಿ, ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಸ್ಥಳೀಯ ಯೋಜನಾ ಪ್ರದೇಶದ ಒಟ್ಟು
236.46 ಚ.ಕಿ.ಮೀ. ವಿಸ್ತೀರ್ಣದಲ್ಲಿ ಪಾರಂಪರಿಕ ಪ್ರದೇಶಕ್ಕೆ ಅಗತ್ಯವಿರುವ ವಿವಿಧ ಭೂ
ಉಪಯೋಗಗಳಿಗೆ ಜಾಗಗಳನ್ನು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಹಂಪಿ ವಿಶ್ವ
ಪರಂಪರೆ ಸ್ಥಳೀಯ ಯೋಜನಾ ಪ್ರದೇಶದ ಜನಸಂಖ್ಯೆ, ಸ್ಮಾರಕಗಳ ರಕ್ಷಣೆ, ಸಾಮಾಜಿಕ ಮತ್ತು
ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಯ ಗತಿ, ರಸ್ತೆಗಳ ಹಾಲಿ ಪರಿಚಲನಾ ವ್ಯವಸ್ಥೆಯ
ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವಗಳಿಗನುಗುಣವಾಗಿ ಹಾಗೂ ಮಹಾ ಯೋಜನೆ

ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 9 ರಿಂದ 12 ರವರೆಗೆ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ನಗರದ ಮುಂದಿನ ಬೆಳವಣಿಗೆಗೆ, ವಿವಿಧ ಉಪಯೋಗಗಳಿಗೆ ಬೇಕಾಗಬಹುದಾದ ಭೂಮಿಯನ್ನು ಕಾಯ್ದಿರಿಸಿ ಮಹಾ ಯೋಜನೆಯನ್ನು ತಯಾರಿಸಿದ್ದು, ಯೋಜನೆಯನ್ನು ಅನುಷ್ಠಾನಗೊಳಿಸಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದೆ. ಸದರಿ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಪ್ರಮುಖ 4 ಗ್ರಾಮಗಳಾದ ಹಂಪಿ, ಕಡ್ಡಿರಾಮಪುರ, ಕಮಲಾಪುರ ಮತ್ತು ಆನೆಗುಂದಿಗಳಿಗೆ ವಿವಿಧ ಭೂ ಉಪಯೋಗಗಳನ್ನು ನಿಗಧಿಪಡಿಸಿ ಅಭಿವೃದ್ಧಿ ಯೋಜನೆ ತಯಾರಿಸಲಾಗಿದೆ. ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಪ್ರಕರಣ 13(2) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಈ ವಿಷಯವನ್ನು ಉಲ್ಲೇಖ (4) ರಂದು [illegible] ಜರುಗಿದ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಹಿನ್ನೆಲೆಯಲ್ಲಿ ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

<u>ಸರ್ಕಾರದ ಆದೇಶ ಸಂಖ್ಯೆ. ನಅಇ 03 ಬೆಮಪ್ರಾ 2007, ಬೆಂಗಳೂರು, ದಿನಾಂಕ: 27.5.2008.</u>

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಂಪಿ ವಿಶ್ವ ಪರಂಪರೆ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಮತ್ತು ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಭಾರತ ರಾಷ್ಟ್ರಾಧ್ಯಕ್ಷರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಜಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

೧) ಜಿಲ್ಲಾಧಿಕಾರಿಗಳು, ಹೊಸಪೇಟೆ ಜಿಲ್ಲೆ, ಹೊಸಪೇಟೆ.
೨) ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
೩) ಆಯುಕ್ತರು, ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ, ಹೊಸಪೇಟೆ.
೪) ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಬಳ್ಳಾರಿ.
೫) ಘನತೆವೆತ್ತ ರಾಜ್ಯಪಾಲರ ಸಲಹೆಗಾರರ ಆಪ್ತ ಕಾರ್ಯದರ್ಶಿ,ವಿಧಾನಸೌಧ, ಬೆಂಗಳೂರು.
೬) ಕರ್ನಾಟಕ ರಾಜ್ಯಪತ್ರ.
೭) ಸರ್ಕಾರದ ಕಾರ್ಯದರ್ಶಿಗಳ/ಜಂಟಿ ಕಾರ್ಯದರ್ಶಿಗಳ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
೮) ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.